ಪತ್ರಿಕೆಯ ಹೆಸರು : NAME OF THE NEWS PAPER:

ದಿನಾಂಕ : DATE : 18/9/2020

## ಕಲಬುರಗಿಯಲ್ಲಿ 13 ಸಾವಿರ ಕೋಟಿ ರೂ. ವೆಚ್ಚದ ವಿವಿಧ ಅಭಿವೃದ್ಧಿ ಯೋಜನೆಗಳ ಘೋಷಣೆ

# ಕಲ್ಯಾಣ ಕರ್ನಾಟಕದಲ್ಲಿ ಅಭಿವೃದ್ಧಿ ಶಕೆ ಆರಂಭ

**ವಿಕ ಸುದ್ದಿಲೋಕ** ಕಲಬುರಗಿ

ಕಲ್ಯಾಣ ಕರ್ನಾಟಕ ಹೆಸರನ್ನು ಅನ್ವರ್ಥಗೊಳಿಸುವ ಸಂಕಲ್ಪ ಮಾಡಿರುವ ಸಿಎಂ ಬಿ.ಎಸ್. ಯಡಿಯೂರಪ್ಪ ಈ ಭಾಗಕ್ಕೆ 13 ಸಾವಿರ ಕೋಟಿ ರೂ. ಮೊತ್ತದ ವಿವಿಧ ಯೋಜನೆಗಳನ್ನು ಪ್ರಕಟಿಸಿದ್ದಾರೆ.

ಕಲಬುರಗಿಯಲ್ಲಿ ಗುರುವಾರ ಕಲ್ಯಾಣ ಕರ್ನಾಟಕ ದಿನಾಚರಣೆ ಪ್ರಯುಕ್ತ ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಅವರು, ''ಮೂರು ಸಾವಿರ ಕೋಟಿ ರೂ.ಗಳ ವೆಚ್ಚದ ಕಾಗಿಣಾ ನದಿಗೆ 10 ಏತ ನೀರಾವರಿ ಯೋಜನೆಗೆ ಅನುಮೋದನೆ ನೀಡಲಾಗಿದೆ. ಇದರಿಂದ ಬೀದರ್-ಕಲಬುರಗಿ ಜಿಲ್ಲೆಯ [illegible] ಎಕರೆ ಜಮೀನಿಗೆ ನೀರುಣಿಸಲಾಗುತ್ತದೆ. ಇದಲ್ಲದೆ ಕುಡಿಯುವ ನೀರಿನ ಬವಣೆಗೆ ಮುಕ್ತಿ ಸಿಗುತ್ತದೆ,'' ಎಂದು ವಿವರಿಸಿದರು.

**ಜಲವಿದ್ಯುತ್:** ರಾಯಚೂರು ಜಿಲ್ಲೆಯ ಗೋಲಪಲ್ಲಿಯಲ್ಲಿ 1,200ಮೆಗಾ ವ್ಯಾಟ್ ಸಾಮರ್ಥ್ಯದ ಹತ್ತು ಸಾವಿರ ಕೋಟಿ ರೂ. ವೆಚ್ಚದಲ್ಲಿ ಜಲ ವಿದ್ಯುತ್ ಯೋಜನೆ ಪರಿಶೀಲನೆಯಲ್ಲಿದ್ದು, ನೆರೆ ರಾಜ್ಯದ ಜತೆ ಮಾತುಕತೆ ನಡೆಸಿ ಜಾರಿಗೊಳಿಸಲಾಗುವುದು. ಈ ಭಾಗದಲ್ಲಿ ರೈಲ್ವೆ ವಿಭಾಗ ಕಚೇರಿ ತೆರೆಯುವುವರ ಕುರಿತು ಕೇಂದ್ರದೊಂದಿಗೆ ಮಾತುಕತೆ ನಡೆಸಲಾಗುವುದು ಎಂದು ಸ್ಪಷ್ಟಪಡಿಸಿದರು.




**ಕಚೇರಿ ಸ್ಥಳಾಂತರ:** ಬೆಳಗಾವಿಯ ಸುವರ್ಣ ಸೌಧಕ್ಕೆ ಮಾಹಿತಿ ಆಯೋಗದ ಕಚೇರಿ ಸೇರಿದಂತೆ ಹಲವು ಕಚೇರಿಗಳನ್ನು ಸ್ಥಳಾಂತರ ಮಾಡಲಾಗುವುದು. ಇದರಿಂದ ಉತ್ತರ ಕರ್ನಾಟಕದ ಜನರಿಗೆ ಹೆಚ್ಚು ಅನುಕೂಲವಾಗಲಿದೆ. ಕೊರೊನಾ ಸಂಕಷ್ಟದಲ್ಲಿಯೂ ಕ-ಕ ಸಂಘಕ್ಕೆ 300 ಕೋಟಿ ರೂ.ಗಳನ್ನು ನೀಡಲು ಅನುಮೋದನ ನೀಡಲಾಗಿದೆ. ಈಗಾಗಲೇ 100 ಕೋಟಿ ರೂ.ಗಳನ್ನು ಬಿಡುಗಡೆ ಮಾಡಲಾಗಿದೆ ಎಂದು ತಿಳಿಸಿದರು.

**ಸ್ಪರ್ಧಾತ್ಮಕ ಪರೀಕ್ಷೆ ತರಬೇತಿ ಕೇಂದ್ರ:** ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳ ತಯಾರಿಗೆ ಬೆಂಗಳೂರಿಗೆ ಹೋಗುವ ಈ ಭಾಗದ ಅಭ್ಯರ್ಥಿಗಳ ವಸತಿ ಸಮಸ್ಯೆ ನಿವಾರಣೆ ಮಾಡಲು ಕೆಕೆಆರ್‌ಡಿಬಿಯಿಂದ ವಸತಿ ಕೇಂದ್ರ ನಿರ್ಮಿಸಲಾಗುವುದು ಎಂದು ಸಿಎಂ ಘೋಷಿಸಿದರು.



ಕಲಬುರಗಿಯಲ್ಲಿ ಜಯದೇವ ಹೃದ್ರೋಗ ಆಸ್ಪತ್ರೆ ಕಾಮಗಾರಿಗೆ ಸಿಎಂ ಬಿಎಸ್‌ವೈ ಚಾಲನೆ ನೀಡಿದರು.



ಸರದಾರ್ ಪಟೇಲ್ ಪ್ರತಿಮೆಗೆ ಸಿಎಂ ಹೂಮಾಲೆ.

### ಸಿಎಂ ಕಾಣಿಕೆ

- ಬಸವಕಲ್ಯಾಣದಲ್ಲಿ ನಾಲ್ಕು ತಿಂಗಳಲ್ಲಿ ಅನುಭವ ಮಂಟಪ ನಿರ್ಮಾಣ ಆರಂಭ
- ಮೂರು ಸಾವಿರ ಕೋಟಿ ರೂ.ಗಳಲ್ಲಿ ಕಾಗಿಣಾ ನದಿಗೆ 10 ಏತ ನೀರಾವರಿ ಯೋಜನೆ.
- ಗೋಲಪಲ್ಲಿಯಲ್ಲಿ 10 ಸಾವಿರ ಕೋಟಿ ರೂ. ವೆಚ್ಚದಲ್ಲಿ 1,200 ಮೆಗಾವ್ಯಾಟ್ ಸಾಮರ್ಥ್ಯದ ಜಲ ವಿದ್ಯುತ್ ಯೋಜನೆ
- ಕಲಬುರಗಿ ರೈಲ್ವೆ ವಿಭಾಗ ಕಚೇರಿ ಆರಂಭಕ್ಕೆ ಕೇಂದ್ರದೊಂದಿಗೆ ವ್ಯವಹಾರ

### ಪಾಟೀಲ್ ಜೋಡಿಯಿಂದ ಕ್ರಾಂತಿ

''ಕೃಷಿ ಆರೋಗ್ಯ , ಶಿಕ್ಷಣ, ಸ್ವಯಂ ಉದ್ಯೋಗ, ಗ್ರಾಮ ಸಬಲೀಕರಣ, ಯುವಜನ ಮತ್ತು ಮಹಿಳಾ ಸಬಲೀಕರಣ ಮತ್ತು ನೈತಿಕ ತತ್ವಗಳನ್ನು ಸಾಧಿಸಿ ಕಲ್ಯಾಣ ಕರ್ನಾಟಕದ ಜನ ಬದುಕಿನಲ್ಲಿ ಹೊಸ ಅಧ್ಯಾಯವೊಂದನ್ನು ತೆರೆಯಲಿದೆ,'' ಎಂದ ಬಿಎಸ್‌ವೈ, ''ಕಲ್ಯಾಣ ಕರ್ನಾಟಕ ಮಾನವ ಸಂಪನ್ಮೂಲ, ಕೃಷಿ ಮತ್ತು ಸಾಂಸ್ಕೃತಿಕ ಸಂಘದ ಅಧ್ಯಕ್ಷ ಬಸವರಾಜ ಪಾಟೀಲ್ ಮತ್ತು ಕೆಕೆಆರ್‌ಡಿಬಿ ಅಧ್ಯಕ್ಷ ದತ್ತಾತ್ರೇಯ ಪಾಟೀಲ್ ರೇವೂರ್ ನೇತೃತ್ವದಲ್ಲಿ ಅಭಿವೃದ್ಧಿಯ ಕ್ರಾಂತಿ ನಿಶ್ಚಿತ,'' ಎಂದು ವಿಶ್ವಾಸ ವ್ಯಕ್ತಪಡಿಸಿದರು.

### ಜಯದೇವಕ್ಕೆ ಶಂಕುಸ್ಥಾಪನೆ

ಕಲಬುರಗಿಯಲ್ಲಿ 150 ಕೋಟಿ ರೂ.ಗಳ ವೆಚ್ಚದಲ್ಲಿ ನಿರ್ಮಿಸಲಾಗುವ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆಯ ಕಲಬುರಗಿ ಶಾಖೆಗೆ ಸಿಎಂ ಬಿ.ಎಸ್.ವೈ. ಚಾಲನೆ ನೀಡಿದರು. 300 ಹಾಸಿಗೆ ಸಾಮರ್ಥ್ಯದ ಈ ಆಸ್ಪತ್ರೆಗೆ ಈಗಾಗಲೇ 7.15 ಎಕರೆ ಜಮೀನು ನೀಡಲಾಗಿದೆ. ಇದಕ್ಕೆ ರಾಜ್ಯ ಸರಕಾರ 33 ಕೋಟಿ ರೂ. ನೀಡಿದೆ. ಉಳಿದ ಹಣ ಕೆಕೆಆರ್‌ಡಿಬಿ ಪಾವತಿಸಲಿದೆ.

### ತಿಂಗಳಲ್ಲಿ ಹೊಸ ಕ್ಯಾಥ್‌ಲ್ಯಾಬ್

ಕಲಬುರಗಿಯ ಜಿಮ್ಸ್ ಮೇಲ್ಮಹಡಿಯಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ 130 ಹಾಸಿಗೆ ಸಾಮರ್ಥ್ಯದ ಜಯದೇವ ಹೃದ್ರೋಗ ಆಸ್ಪತ್ರೆಯಲ್ಲಿ ತಿಂಗಳ ಅವಧಿಯಲ್ಲಿ ಒಂದು ಹೊಸ ಕಾರ್ಡಿಯಾಕ್ ಕ್ಯಾಥ್ ಲ್ಯಾಬ್ ಸೇವೆ ಆರಂಭಿಸಲಾಗುತ್ತಿದೆ ಎಂದು ನಿರ್ದೇಶಕ ಡಾ.ಸಿ.ಎನ್.ಮಂಜುನಾಥ ಮಾಹಿತಿ ನೀಡಿದ್ದಾರೆ. ಕ್ಯಾಥ್ ಲ್ಯಾಬ್ ಸೇವೆ ಆರಂಭದಿಂದ ಇನ್ನು ಮುಂದೆ ಆ್ಯಂಜಿಯೊಗ್ರಾಮ್ ಮತ್ತು ಆ್ಯಂಜಿಯೊಪ್ಲಾಸ್ಟಿ ಸೇವೆಗಾಗಿ ಹೃದ್ರೋಗಿಗಳು ಹೆಚ್ಚು ಕಾಯಬೇಕಾದ ಅಗತ್ಯ ಇರುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

### ವಿಮಾನ ನಿಲ್ದಾಣ: ಡಿಪಿಆರ್‌ಗೆ ನಿರ್ದೇಶನ

**ರಾಯಚೂರು:** ಯರಮರಸ್ ಬಳಿ ವಿಮಾನ ನಿಲ್ದಾಣ ನಿರ್ಮಾಣಕ್ಕೆ ಸಂಬಂಧಿಸಿದಂತೆ ವಿಸ್ತೃತ ಯೋಜನಾ ವರದಿ ಸಿದ್ಧಪಡಿಸುವಂತೆ ಡಿಸಿಎಂ ಲಕ್ಷ್ಮಣ ಸವದಿ ಅವರು ಜಿಲ್ಲಾಧಿಕಾರಿ ಆರ್. ವೆಂಕಟೇಶ್‌ಕುಮಾರ್ ಅವರಿಗೆ ನಿರ್ದೇಶನ ನೀಡಿದರು.ನಗರದ ಯರಮರಸ್ ಬಳಿ ಗುರುವಾರ, ಉದ್ದೇಶಿತ ವಿಮಾನ ನಿಲ್ದಾಣ ಸ್ಥಳ ಪರಿಶೀಲಿಸಿದ ನಂತರ ಅವರು ಅಧಿಕಾರಿಗಳೊಂದಿಗೆ ಚರ್ಚಿಸಿದರು.



''ವಿಮಾನ ನಿಲ್ದಾಣ ನಿರ್ಮಾಣಕ್ಕೆ 200 ಕೋಟಿ ರೂ. ಅಗತ್ಯವಿದೆ. ಈಗಾಗಲೇ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯಿಂದ 40 ಕೋಟಿ ರೂ.ಗೂ ಹೆಚ್ಚು ಅನುದಾನ ನೀಡಲಾಗಿದೆ. ಬಾಕಿ ಅನುದಾನವನ್ನು ರಾಜ್ಯ ಹಾಗೂ ಕೇಂದ್ರ ಸರಕಾರದಿಂದ ಭರಿಸಲು ಕ್ರಮ ಕೈಗೊಳ್ಳಲಾಗುವುದು. ಡಿಸಿ ಖಾತೆಯಲ್ಲಿ ಇರುವ ಅನುದಾನದಲ್ಲಿಯೇ ಕಾಮಗಾರಿ ಪ್ರಾರಂಭಿಸಲಾಗುವುದು,'' ಎಂದರು.